ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಬೀದರ್ ಜಿಲ್ಲೆಯಲ್ಲಿ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗೆ ಅನುದಾನ ನೀಡುವ ಬಗ್ಗೆ

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

246 (272) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಔರಾದ್-ಬೀದರ್ ರಾಜ್ಯ ಹೆದ್ದಾರಿ ರಸ್ತೆ ಸಂಪೂರ್ಣ ಹಾಳಾಗಿದ್ದು, ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಕಳೆದ 2013ರಿಂದ ಇಲ್ಲಿಯವರೆಗೆ ಔರಾದ್-ಬೀದರ್ ರಸ್ತೆಗಾಗಿ ಖರ್ಚು ಮಾಡಿದ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಔರಾದ್-ಬೀದರ್ ರಾಜ್ಯ ಹೆದ್ದಾರಿ ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿದ್ದು, ರಸ್ತೆ ನಿರ್ಮಾಣವಾಗಲು ಇನ್ನು ಎಷ್ಟು ಕಾಲಾವಧಿ ಬೇಕಾಗುವುದು ; (ಮಾಹಿತಿ ನೀಡುವುದು)

(ಈ) ಅತಿವೃಷ್ಟಿಯಿಂದ ಹಾಳಾದ ಬ್ರಿಡ್ಜ್‌ಗಳ ದುರಸ್ಥಿಗೆ ಖರ್ಚು ಮಾಡಿದ ಅನುದಾನವೆಷ್ಟು; ಕಾಮಗಾರಿಗಳು ಕಳಪೆ ಮಟ್ಟದಲ್ಲಿ ನಡೆದಿದೆ ಎಂಬ ದೂರುಗಳು ಬಂದಿವೆಯೇ; ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?